# All India Radio: Bangalore
# National Bulletin In Kannada
# 05.02.2025 13.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

## 05.02.2025 13.10 p.m.

***************

ಮುಖ್ಯಾಂಶಗಳು

1. ದೆಹಲಿ ವಿಧಾನಸಭಾ ಚುನಾವಣೆ; ಶಾಂತಿಯುತ ಮತದಾನ; ರಾಷ್ಟ್ರಪತಿ, ಉಪರಾಷ್ಟ್ರಪತಿ ಸೇರಿದಂತೆ ಗಣ್ಯರಿಂದ ಹಕ್ಕು ಚಲಾವಣೆ
2. ಪ್ರಯಾಗ್‌ರಾಜ್‌ನ ಮಹಾಕುಂಭ ಮೇಳದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಂದ ಅಮೃತ ಸ್ನಾನ; ಗಂಗಾ ಪೂಜೆ
3. ಗಾಜಾ ಪ್ರದೇಶವನ್ನು ಸ್ವಾಧೀನಕ್ಕೆ ತೆಗೆದುಕೊಂಡು ಆರ್ಥಿಕ ಅಭಿವೃದ್ಧಿಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಯೋಜನೆ
4. ರೊಜಾರಿಯೊ ಚಾಲೆಂಜರ್ ಟೆನಿಸ್; ಪ್ರೀ ಕ್ವಾರ್ಟರ್ ಫೈನಲ್‌ನಲ್ಲಿಂದು ಭಾರತದ ಸುಮಿತ್ ನಗಾಲ್ ಕಣದಲ್ಲಿ

***************

ದೆಹಲಿ ವಿಧಾನಸಭೆಯ 70 ಕ್ಷೇತ್ರಗಳಿಗೆ ಇಂದು ನಡೆಯುತ್ತಿರುವ ಚುನಾವಣೆಯ ಮತದಾನ ಪ್ರಕ್ರಿಯೆ ಶಾಂತಿಯುತವಾಗಿ ಸಾಗಿದೆ. ಸಂಜೆ 6 ಗಂಟೆವರೆಗೆ ಮತದಾರರಿಗೆ ತಮ್ಮ ಹಕ್ಕು ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ.

11 ಗಂಟೆಗೆ ಬಂದ ವರದಿಯ ಪ್ರಕಾರ ಶೇಕಡ 20 ರಷ್ಟು ಮತದಾನವಾಗಿದೆ. ಬಾಬರ್‌ಪುರ್ ಕ್ಷೇತ್ರದಲ್ಲಿ ಅತಿ ಹೆಚ್ಚು ಶೇಕಡ 31.3 ರಷ್ಟು ಹಾಗೂ ಚಾಂದಿನಿ ಚೌಕ್‌ನಲ್ಲಿ ಕನಿಷ್ಠ ಶೇಕಡ 13.27 ರಷ್ಟು ಮತದಾನವಾಗಿದೆ.

ಇಂದು ಬೆಳಗ್ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಕೇಂದ್ರ ಸಚಿವರಾದ ಡಾ.ಎಸ್.ಜೈಶಂಕರ್, ಹರ್ದೀಪ್ ಸಿಂಗ್ ಪುರಿ, ಕಾಂಗ್ರೆಸ್ ಹಿರಿಯ ನಾಯಕ ರಾಹುಲ್ ಗಾಂಧಿ, ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿನಯ್ ಕುಮಾರ್ ಸಕ್ಸೇನಾ, ದೆಹಲಿ ಮುಖ್ಯಮಂತ್ರಿ ಅತಿಶಿ ಸೇರಿದಂತೆ ಹಲವು ಗಣ್ಯರು ತಮ್ಮ ಮತ ಚಲಾಯಿಸಿದ್ದಾರೆ.

ಮತ ಚಲಾಯಿಸಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಮತದಾನ ಎಲ್ಲರ ಮೂಲಭೂತ ಹಕ್ಕಾಗಿದೆ. ಇದು ಪ್ರಜಾಪ್ರಭುತ್ವದ ಅಡಿಪಾಯವಾಗಿದೆ ಎಂದರು. ಇದೇ ವೇಳೆ ಅವರು, ಸುಗಮ ಮತದಾನಕ್ಕಾಗಿ ಚುನಾವಣಾ ಆಯೋಗ ಮಾಡಿರುವ ವ್ಯವಸ್ಥೆಯನ್ನು ಶ್ಲಾಘಿಸಿದರು.

ಒಂದು ಕೋಟಿ 56 ಲಕ್ಷಕ್ಕೂ ಹೆಚ್ಚು ಮತದಾರರು, ಕಣದಲ್ಲಿರುವ 699 ಅಭ್ಯರ್ಥಿಗಳ ರಾಜಕೀಯ ಭವಿಷ್ಯ ನಿರ್ಧರಿಸಲಿದ್ದಾರೆ.

## 05.02.2025 ರಾಷ್ಟ್ರೀಯ ವಾರ್ತೆಗಳು 1.10 ದೆಹಲಿ – ಚುನಾವಣೆ–2

ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್, ದೆಹಲಿ ಮುಖ್ಯಮಂತ್ರಿ ಅತಿಶಿ, ಬಿಜೆಪಿ ವಿಜೇಂದರ್ ಗುಪ್ತಾ, ಪ್ರವೇಶ್ ವರ್ಮಾ, ರಮೇಶ್ ಬಿದೂರಿ, ಕೈಲಾಶ್ ಗೆಹ್ಲೋಟ್, ಕಾಂಗ್ರೆಸ್‌ನ ಸಂದೀಪ್ ದೀಕ್ಷಿತ್, ಹರುನ್ ಯೂಸೂಫ್ ಮತ್ತು ಅಲ್ಕಾಲಂಬಾ ಕಣದಲ್ಲಿರುವ ಪ್ರಮುಖರಾಗಿದ್ದಾರೆ.

ಈ ನಡುವೆ ಮುಖ್ಯ ಚುನಾವಣಾಧಿಕಾರಿ ರಾಜೀವ್ ಕುಮಾರ್ ಸುಗಮ ಚುನಾವಣೆ ನಡೆಸಲು ಸಹಕರಿಸುತ್ತಿರುವ ಎಲ್ಲಾ ಮತಗಟ್ಟೆ ಅಧಿಕಾರಿ, ಭದ್ರತಾಪಡೆ ಮತ್ತಿತರರನ್ನು ಶ್ಲಾಘಿಸಿದ್ದಾರೆ. ನ್ಯೂ ಮೋತಿಬಾಗ್ ಪ್ರದೇಶದಲ್ಲಿ ಇಂದು ಮತದಾನ ಹಕ್ಕು ಚಲಾಯಿಸಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಚುನಾವಣಾಧಿಕಾರಿಗಳು ಮತ್ತು ಪೊಲೀಸ್ ಉಪಾಆಯುಕ್ತರ ಪರಿಶ್ರಮದಿಂದ ವಿವಿಧ ಪಕ್ಷಗಳ 12 ರಿಂದ 13 ಸಾವಿರ ಚುನಾವಣಾ ರ‍್ಯಾಲಿಗಳನ್ನು ದೆಹಲಿಯಲ್ಲಿ ಶಾಂತಿಯುತವಾಗಿ ನಡೆಸಲಾಗಿದೆ ಎಂದರು.

ಧ್ವನಿ: ಮುಖ್ಯ ಚುನಾವಣಾಧಿಕಾರಿ ರಾಜೀವ್ ಕುಮಾರ್ ( 24 ಸೆಕೆಂಡ್)

ದೆಹಲಿ ವಿಧಾನಸಭಾ ಚುನಾವಣೆ ಜೊತೆಗೆ ತಮಿಳುನಾಡಿನ ಇರೋಡ್ ಪೂರ್ವ ಕ್ಷೇತ್ರ ಹಾಗೂ ಉತ್ತರಪ್ರದೇಶದ ಮಿಲ್ಕಿಪುರ್ ಕ್ಷೇತ್ರಗಳಿಗೆ ಇಂದು ಉಪಚುನಾವಣೆ ನಡೆಯುತ್ತಿದೆ.

***************

ಪ್ರಧಾನಿ ನರೇಂದ್ರ ಮೋದಿ ಅವರಿಂದು ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳಕ್ಕೆ ಭೇಟಿ ನೀಡಿದರು.

ದೋಣಿಯ ಮೂಲಕ ತ್ರಿವೇಣಿ ಸಂಗಮಕ್ಕೆ ತೆರಳಿ ಅಮೃತ ಸ್ನಾನ ಮಾಡಿದರು. ಈ ವೇಳೆ ಅವರು, ಸೂರ್ಯ ದೇವರಿಗೆ ಅರ್ಘ್ಯ ಅರ್ಪಿಸಿದರು. ನಂತರ ಗಂಗಾ ಪೂಜೆ ನೆರವೇರಿಸಿದರು. ಅವರೊಂದಿಗೆ ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಉಪಸ್ಥಿತರಿದ್ದರು.

ಜನವರಿ 13 ರಂದು ಆರಂಭವಾಗಿರುವ ಮಹಾಕುಂಭಮೇಳದಲ್ಲಿ ಈವರೆಗೆ 38 ಕೋಟಿಗೂ ಅಧಿಕ ಭಕ್ತಾದಿಗಳು ತ್ರಿವೇಣಿ ಸಂಗಮದಲ್ಲಿ ಅಮೃತ ಸ್ನಾನ ಮಾಡಿದ್ದಾರೆ.

ಭಾರತದ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಉತ್ತೇಜಿಸುವ ಮತ್ತು ಸಂರಕ್ಷಿಸುವ ಸರ್ಕಾರದ ಬದ್ಧತೆಗೆ ಅನುಗುಣವಾಗಿ, ಪ್ರಧಾನ ಮಂತ್ರಿಗಳು ತೀರ್ಥಕ್ಷೇತ್ರಗಳಲ್ಲಿ ಮೂಲಸೌಕರ್ಯ ಮತ್ತು ಸೌಲಭ್ಯಗಳನ್ನು ಹೆಚ್ಚಿಸಲು

ನಿರಂತರವಾಗಿ ಕ್ರಮಗಳನ್ನು ತೆಗೆದುಕೊಂಡಿದ್ದಾರೆ. ಇದಕ್ಕೂ ಮೊದಲು, ಕಳೆದ ವರ್ಷ ಡಿಸೆಂಬರ್‌ನಲ್ಲಿ ಪ್ರಯಾಗ್‌ರಾಜ್‌ಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ, ಪ್ರಧಾನಿ, ಸಾರ್ವಜನಿಕರಿಗೆ ಸಂಪರ್ಕ, ಸೌಕರ್ಯಗಳು ಮತ್ತು ಸೇವೆಗಳನ್ನು ಸುಧಾರಿಸುವ ನಿಟ್ಟಿನಲ್ಲಿ 5 ಸಾವಿರದ 500 ಕೋಟಿ ರೂಪಾಯಿ ಮೌಲ್ಯದ 167 ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿದ್ದರು.

***************

ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್‌ಸಿಂಗ್ ಚೌಹಾಣ್, ಇಂದು ಹೈಬ್ರಿಡ್ ಮಾದರಿಯಲ್ಲಿ ದೇಶವ್ಯಾಪಿ ಜಲಕ್ಷೇತ್ರ ಯಾತ್ರೆಗೆ ಚಾಲನೆ ನೀಡಿದರು.

ಈ ಅಭಿಯಾನ 'ಜಲ್ ಲಾಯೆ, ಧನ ಧಾನ್ಯ' ಘೋಷವಾಕ್ಯದದೊಂದಿಗೆ ಆರಂಭವಾಗಲಿದ್ದು, ಜಲಕ್ಷೇತ್ರ ಅಭಿವೃದ್ಧಿ ಚಟುವಟಿಕೆಗಳ ಕುರಿತು ಜನರಲ್ಲಿ ಅರಿವು ಮೂಡಿಸುವ ಗುರಿ ಹೊಂದಿದೆ. 'ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ 2.0 ಯ ಭಾಗವಾಗಿರುವ ಈ ಅಭಿಯಾನ, ಕೃಷಿ ಮತ್ತು ಜೀವನೋಪಾಯ ಮತ್ತು ಪರಿಸರ ಆರೋಗ್ಯ ಬಲಪಡಿಸುವಲ್ಲಿ ಸುಸ್ಥಿರ ನೈಸರ್ಗಿಕ ಸಂಪನ್ಮೂಲಗಳ ಪಾತ್ರದ ಕುರಿತು ತಿಳಿಸುತ್ತದೆ.

***************

ಭಾರತೀಯ ರಿಸರ್ವ್ ಬ್ಯಾಂಕ್– ಆರ್‌ಬಿಐನ ಹಣಕಾಸು ನೀತಿ ಸಮಿತಿ–ಎಂಪಿಸಿಯ ಮೂರು ದಿನಗಳ ಸಭೆ ಮುಂಬೈನಲ್ಲಿಂದು ಆರಂಭವಾಗಲಿದೆ.

ಇದೇ ಶುಕ್ರವಾರದವರೆಗೆ ಸಭೆ ನಡೆಯಲಿದ್ದು, ಅಂದು ಬೆಳಗ್ಗೆ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಬಡ್ಡಿದರಗಳ ಕುರಿತು ಎಂಪಿಸಿ ಯ ನಿರ್ಧಾರಗಳನ್ನು ಪ್ರಕಟಿಸಲಿದ್ದಾರೆ.

ನೂತನ ಆರ್‌ಬಿಐ ಗವರ್ನರ್ ಆಗಿ ನೇಮಕಗೊಂಡ ಬಳಿಕ ಸಂಜಯ್ ಮಲ್ಹೋತ್ರಾ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ ಮೊದಲ ಸಭೆ ಇದಾಗಿದೆ. ಪ್ರಸ್ತುತ ಫೆಬ್ರವರಿ 2023 ರಿಂದ ರೆಪೊ ದರವನ್ನು ಶೇಕಡ 6.5 ರಷ್ಟು ಯಥಾಸ್ಥಿತಿಯಲ್ಲಿ ಆರ್‌ಬಿಐ ಇರಿಸಿದೆ.

***************

ಜಮ್ಮು–ಕಾಶ್ಮೀರದ ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಬಜೆಟ್ ಪೂರ್ವ ಸಭೆಯನ್ನು ಇಂದು ನಡೆಸಲಿದ್ದಾರೆ. ಆರ್ಥಿಕ ಇಲಾಖೆಯ ಜವಾಬ್ದಾರಿ ಹೊಂದಿರುವ ಮುಖ್ಯಮಂತ್ರಿ, ಶಾಸಕರೊಂದಿಗೆ ಹಾಗೂ ಜಿಲ್ಲಾ ಅಭಿವೃದ್ಧಿ ಸಮಿತಿ ಸದಸ್ಯರೊಂದಿಗೆ ಸಮಾಲೋಚನೆ ನಡೆಸಲಿದ್ದಾರೆ.

***************

ಶ್ರೀಲಂಕಾದಲ್ಲಿ, ಜನವರಿ ತಿಂಗಳಲ್ಲಿ ಸುಮಾರು 5 ಸಾವಿರ ಡೆಂಘೀ ಪ್ರಕರಣಗಳು ಮತ್ತು ಎರಡು ಡೆಂಘೀ ಸಂಬಂಧಿತ ಸಾವುಗಳು ವರದಿಯಾಗಿವೆ. ರಾಷ್ಟ್ರೀಯ ಡೆಂಘೀ ನಿಯಂತ್ರಣ ಘಟಕವು 4 ಸಾವಿರದ 943 ಡೆಂಘೀ

ಪ್ರಕರಣಗಳು ದಾಖಲಾಗಿವೆ ಮತ್ತು ದೇಶಾದ್ಯಂತ 16 ಹೈ-ರಿಸ್ಕ್ ಡೆಂಘೀ ವಲಯಗಳನ್ನು ಗುರುತಿಸಿದೆ ಎಂದು ವರದಿ ಮಾಡಿದೆ.

ಗಂಪಹಾಮಾ ಜಿಲ್ಲೆಯಲ್ಲಿ ಅತಿ ಹೆಚ್ಚು 764 ಪ್ರಕರಣಗಳು ದಾಖಲಾಗಿವೆ, ನಂತರ ಕೊಲಂಬೊದಲ್ಲಿ 674 ಪ್ರಕರಣಗಳು ಮತ್ತು ಕೊಲಂಬೊ ಮುನ್ಸಿಪಲ್ ಕೌನ್ಸಿಲ್ ಪ್ರದೇಶದಲ್ಲಿ 608 ಪ್ರಕರಣಗಳು ದಾಖಲಾಗಿವೆ.

ಡೆಂಘೀ ಹರಡುವಿಕೆಯನ್ನು ತಡೆಗಟ್ಟುವ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅಧಿಕಾರಿಗಳು ಸಾರ್ವಜನಿಕರನ್ನು ಒತ್ತಾಯಿಸಿದ್ದಾರೆ. 2024 ರಲ್ಲಿ, ಶ್ರೀಲಂಕಾದಲ್ಲಿ ಸುಮಾರು 50 ಸಾವಿರ ಪ್ರಕರಣಗಳು ದಾಖಲಾಗಿದ್ದು, 24 ಸಾವುಗಳು ಸಂಭವಿಸಿವೆ.

***************

ಲಿಬಿಯಾದ ಬೆಂಗಾಜಿಯಿಂದ 18 ಭಾರತೀಯ ಪ್ರಜೆಗಳು ಭಾರತಕ್ಕೆ ಹಿಂದಿರುಗಲು ಲಿಬಿಯಾದಲ್ಲಿರುವ ಭಾರತೀಯ ರಾಯಭಾರ ಕಚೇರಿ ಅನುಕೂಲ ಮಾಡಿಕೊಟ್ಟಿದ್ದು, ಇಂದು ದೇಶಕ್ಕೆ ಆಗಮಿಸಲಿದ್ದಾರೆ.

ಕೆಲಸದ ನಿಮಿತ್ತ ಲಿಬಿಯಾಗೆ ಹೋಗಿದ್ದ ಈ ಭಾರತೀಯರು, ಹಲವಾರು ವಾರಗಳಿಂದ ಅಲ್ಲಿ ಸಿಲುಕಿಕೊಂಡಿದ್ದರು ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ರಾಯಭಾರ ಕಚೇರಿ ಸ್ಥಳೀಯ ಅಧಿಕಾರಿಗಳೊಂದಿಗೆ ನಿಕಟವಾಗಿ ಕೆಲಸ ಮಾಡಿದ್ದು, ಭಾರತೀಯ ಕಾರ್ಮಿಕರಿಗೆ ಅಗತ್ಯವಾದ ಗುರುತು ಮತ್ತು ಪ್ರಯಾಣ ದಾಖಲೆಗಳೊಂದಿಗೆ ಸಹಾಯ ಮಾಡಿದೆ ಎಂದು ಅವರು ಹೇಳಿದರು.

ಅವರ ಯೋಗಕ್ಷೇಮವನ್ನು ಖಚಿತಪಡಿಸಿಕೊಳ್ಳಲು ರಾಯಭಾರ ಕಚೇರಿ ಅವರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಈ ಪ್ರಕರಣದ ಪರಿಶೀಲನೆಯ ಸಂದರ್ಭದಲ್ಲಿ ಸಂತ್ರಸ್ತರೆಲ್ಲರಿಗೂ ದೈನಂದಿನ ಜೀವನೋಪಾಯದ ಸಾಮಗ್ರಿಗಳೊಂದಿಗೆ ಸಹಾಯ ಮಾಡಲಾಗಿದೆ ಎಂದು ಅವರು ಹೇಳಿದರು.

ಅದೇ ಗುಂಪಿನ ಇತರ ಮೂವರು ಭಾರತೀಯ ಪ್ರಜೆಗಳು ಕಳೆದ ಅಕ್ಟೋಬರ್ ತಿಂಗಳ ಆರಂಭದಲ್ಲಿ ದೇಶಕ್ಕೆ ಮರಳಿದ್ದರು. ವಿದೇಶದಲ್ಲಿರುವ ಎಲ್ಲಾ ಭಾರತೀಯರ ಕಲ್ಯಾಣ ಮತ್ತು ಸುರಕ್ಷತೆಗೆ ಭಾರತ ಸರ್ಕಾರ ಬದ್ಧವಾಗಿದೆ ಎಂದು ರಣಧೀರ್ ಜೈಸ್ವಾಲ್ ಹೇಳಿದರು.

***************

ಯುದ್ಧ ಪೀಡಿತ ಗಾಜಾ ಪ್ರದೇಶವನ್ನು ತನ್ನ ಸ್ವಾಧೀನಕ್ಕೆ ತೆಗೆದುಕೊಂಡು ಆರ್ಥಿಕವಾಗಿ ಅಭಿವೃದ್ಧಿಪಡಿಸಲು ಅಮೆರಿಕಾ ಯೋಜಿಸಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಹೇಳಿದ್ದಾರೆ.

ಶ್ವೇತಭವನದಲ್ಲಿಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗೆ ನೀಡಿದ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆ ಪ್ರದೇಶದಲ್ಲಿರುವ ಸ್ಫೋಟಗೊಳ್ಳದ ಬಾಂಬ್ ಹಾಗೂ ಇತರ ಶಸ್ತ್ರಾಸ್ತ್ರಗಳನ್ನು ತೆರವುಗೊಳಿಸುವ ಜವಾಬ್ದಾರಿಯನ್ನು ಅಮೆರಿಕ ವಹಿಸಿಕೊಳ್ಳಲಿದೆ ಎಂದು ಅವರು ತಿಳಿಸಿದರು.

ಅಗತ್ಯವಿದ್ದಲ್ಲಿ ಆ ಪ್ರದೇಶವನ್ನು ಅಭಿವೃದ್ಧಿಪಡಿಸಿ ಸಾವಿರಾರು ಉದ್ಯೋಗ ಸೃಷ್ಟಿ ಮಾಡಿ, ಇಡೀ ಪಶ್ಚಿಮ ಏಷ್ಯಾ ಹೆಮ್ಮೆ ಪಡುವಂತೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

***************

ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಸಮಿತಿ ಯು.ಎನ್.ಎಚ್.ಆರ್.ಸಿ ಯಿಂದ ಅಮೆರಿಕ ಹೊರಬರುವ ಕಾರ್ಯಕಾರಿ ಆದೇಶಕ್ಕೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಹಿ ಹಾಕಿದ್ದಾರೆ.

ಇದರ ಜೊತೆಗೆ ಯುನೆಸ್ಕೋದಲ್ಲಿ ತನ್ನ ಭಾಗವಹಿಸುವಿಕೆಯನ್ನು ಪರಿಶೀಲಿಸುವಂತೆ ಅವರು ಆದೇಶಿಸಿದ್ದಾರೆ.

***************

ಅರ್ಜೆಂಟೀನಾದಲ್ಲಿ ನಡೆಯಲಿರುವ ರೊಸಾರಿಯೊ ಚಾಲೆಂಜರ್ ಟೆನಿಸ್‌ನ ಪುರುಷರ ಸಿಂಗಲ್ಸ್‌ನ ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿಂದು ಭಾರತದ ಸುಮಿತ್ ನಗಾಲ್, ಬೊಲಿವಿಯಾದ ಹ್ಯೂಗೋ ಡೆಲಿಯನ್ ಅವರನ್ನು ಎದುರಿಸಲಿದ್ದಾರೆ. ಇದಕ್ಕೂ ಮೊದಲು, ಅವರು, ರೆಂಜೊ ಒಲಿವೊ ವಿರುದ್ಧ 5-7, 6-1, 6-0 ಅಂತರದಲ್ಲಿ ಜಯಗಳಿಸಿ 16 ರ ಸುತ್ತಿಗೆ ಲಗ್ಗೆ ಇಟ್ಟರು.

***************

ನಾಳೆಯಿಂದ ಪ್ರಾರಂಭವಾಗಲಿರುವ ಭಾರತ ಮತ್ತು ಇಂಗ್ಲೆಂಡ್ ತಂಡಗಳ ನಡುವಿನ ಮೂರು ಏಕದಿನ ಪಂದ್ಯಗಳಿಗೆ ಭಾರತೀಯ ಕ್ರಿಕೆಟ್ ನಿಯಂತ್ರಣಾ ಮಂಡಳಿ- ಬಿಸಿಸಿಐ, ವರುಣ್ ಚಕ್ರವರ್ತಿ ಅವರನ್ನು ತಂಡಕ್ಕೆ ಸೇರ್ಪಡೆ ಮಾಡಿಕೊಂಡಿದೆ.

ಇತ್ತೀಚಿಗೆ ರಾಜ್‌ಕೋಟ್‌ನಲ್ಲಿ ನಡೆದ ಪಂದ್ಯಾವಳಿಯಲ್ಲಿ ವರುಣ್, 14 ವಿಕೆಟ್‌ಗಳನ್ನು ಪಡೆದು, ಅಮೋಘ ಪ್ರದರ್ಶನ ನೀಡಿದ್ದರು.

ನಾಳೆ ನಾಗ್ಪುರದಲ್ಲಿ ಮೊದಲ ಏಕದಿನ ಪಂದ್ಯ ನಡೆಯಲಿದ್ದು, ಪಂದ್ಯ ಮಧ್ಯಾಹ್ನ 1.30 ಕ್ಕೆ ಆರಂಭವಾಗಲಿದೆ.

********ಮುಕ್ತಾಯ*******